**Akashvani : Bangalore**
**National Bulletin In Kannada**
**07.10.2024 / 13.10 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**07.10.2024 / 13.10 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಪ್ರಧಾನಿ ನರೇಂದ್ರ ಮೋದಿ - ಮಾಲ್ಡೀವ್ಸ್ ಅಧ್ಯಕ್ಷ ಡಾ. ಮೊಹಮ್ಮದ್ ಮುಯಿಜು ನಡುವೆ ದೆಹಲಿಯಲ್ಲಿಂದು ಮಹತ್ವದ ಮಾತುಕತೆ ಪ್ರಗತಿಯಲ್ಲಿ

೨. ಎಡಪಂಥೀಯ ಉಗ್ರವಾದ ನಿಗ್ರಹ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳ ಸಭೆ

೩. ನಾಳೆ ಹರಿಯಾಣ, ಜಮ್ಮು ಮತ್ತು ಕಾಶ್ಮೀರ ವಿಧಾನಸಭಾ ಚುನಾವಣಾ ಮತ ಎಣಿಕೆ ; ಚುನಾವಣಾ ಆಯೋಗದಿಂದ ವ್ಯಾಪಕ ಬಿಗಿ ಭದ್ರತೆ

೪. ಬಾಹ್ಯಾಕಾಶ ನವೋದ್ಯಮಗಳ ಉತ್ತೇಜನಕ್ಕೆ ಕೇಂದ್ರದಿಂದ ೧ ಸಾವಿರ ಕೋಟಿ ರೂಪಾಯಿ ಸಾಹಸ ನಿಧಿ ಸ್ಥಾಪನೆ

೫. ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್ : ಶಾರ್ಜಾದಲ್ಲಿಂದು ಇಂಗ್ಲೆಂಡ್-ದಕ್ಷಿಣ ಆಫ್ರಿಕಾ ತಂಡಗಳ ನಡುವೆ ಹಣಾಹಣಿ

**<><*<><>*><>**

ಪ್ರಧಾನಿ ನರೇಂದ್ರ ಮೋದಿ, ಮಾಲ್ಡೀವ್ಸ್ ಅಧ್ಯಕ್ಷ ಡಾ. ಮೊಹಮ್ಮದ್ ಮುಯಿಜು ಅವರೊಂದಿಗೆ ದೆಹಲಿಯ ಹೈದರಾಬಾದ್ ಭವನದಲ್ಲಿ ಮಾತುಕತೆ ನಡೆಸುತ್ತಿದ್ದಾರೆ. ದ್ವಿಪಕ್ಷೀಯ, ಪ್ರಾದೇಶಿಕ ಹಾಗೂ ಪರಸ್ಪರ ಹಿತಾಸಕ್ತಿಯ ಅಂತಾರಾಷ್ಟ್ರೀಯ ವಿಚಾರಗಳ ಕುರಿತು ಮಾತುಕತೆ ಸಂದರ್ಭದಲ್ಲಿ ಪ್ರಸ್ತಾಪಕ್ಕೆ ಬರಲಿವೆ. ಸಭೆಯ ನಂತರ ಉಭಯ ದೇಶಗಳ ನಡುವೆ ಹಲವಾರು ಮಹತ್ವದ ಒಪ್ಪಂದಗಳಿಗೆ ಸಹಿ ಹಾಕುವ ನಿರೀಕ್ಷೆಯಿದೆ. ಇದಕ್ಕೂ ಮುನ್ನ, ಮಾಲ್ಡೀವ್ಸ್ ಅಧ್ಯಕ್ಷ ಡಾ. ಮೊಹಮ್ಮದ್ ಮುಯಿಜು ಅವರಿಗೆ, ರಾಷ್ಟ್ರಪತಿ ಭವನದಲ್ಲಿಂದು ಬೆಳಗ್ಗೆ ಸಾಂಪ್ರದಾಯಿಕ ಸ್ವಾಗತ ಕೋರಲಾಯಿತು. ಈ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ, ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಅವರು ಉಪಸ್ಥಿತರಿದ್ದು, ಡಾ. ಮುಯಿಜು ಮತ್ತು ಅವರ ಪತ್ನಿ ಸಜಿಧಾ ಮೊಹಮ್ಮದ್ ಅವರನ್ನು ಆತ್ಮೀಯವಾಗಿ ಬರಮಾಡಿಕೊಂಡರು. ಡಾ. ಮುಯಿಜು ಅವರಿಗೆ ಗೌರವ ವಂದನೆ ನೀಡಲಾಯಿತು. ಬಳಿಕ ಮಾಲ್ಡೀವ್ಸ್ ಅಧ್ಯಕ್ಷರು ರಾಜ್‌ಘಾಟ್‌ಗೆ

ಭೇಟಿ ನೀಡಿ, ರಾಷ್ಟ್ರಪಿತ ಮಹಾತ್ಮಾಗಾಂಧಿ ಅವರಿಗೆ ಗೌರವ ನಮನ ಸಲ್ಲಿಸಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಆಹ್ವಾನದ ಮೇರೆಗೆ ಡಾ. ಮುಯಿಜು ಭಾರತಕ್ಕೆ ೫ ದಿನಗಳ ಭೇಟಿಗಾಗಿ ನಿನ್ನೆ ದೆಹಲಿಗೆ ಆಗಮಿಸಿದರು. ಡಾ. ಮುಯಿಜು, ನಾಳೆ ಆಗ್ರಾ ಮತ್ತು ಮುಂಬೈಗೆ ಭೇಟಿ ನೀಡಲಿದ್ದು, ಬುಧವಾರ ಬೆಂಗಳೂರಿಗೆ ಆಗಮಿಸಲಿದ್ದಾರೆ. ಮುಯಿಜು ಅವರು, ಇದೇ ಮೊದಲ ಬಾರಿಗೆ ದ್ವಿಪಕ್ಷೀಯ ಮಾತುಕತೆಗಾಗಿ ಭಾರತಕ್ಕೆ ಆಗಮಿಸಿದ್ದಾರೆ. ಇದಕ್ಕೂ ಮುನ್ನ ಅವರು, ಈ ವರ್ಷದ ಜೂನ್‌ತಿಂಗಳಲ್ಲಿ ನಡೆದ ಪ್ರಧಾನಿ ನರೇಂದ್ರ ಮೋದಿ ಮತ್ತು ಅವರ ಸಚಿವ ಸಂಪುಟ ಸಹದ್ಯೋಗಿಗಳ ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸಲು ಭಾರತಕ್ಕೆ ಭೇಟಿ ನೀಡಿದ್ದರು ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

<><*<><>*><>

ಎಡಪಂಥೀಯ ಉಗ್ರವಾದದಿಂದ ತೊಂದರೆಗೀಡಾಗಿರುವ ರಾಜ್ಯಗಳ ಮುಖ್ಯಮಂತ್ರಿಗಳ ಪರಿಶೀಲನಾ ಸಭೆ ದೆಹಲಿಯಲ್ಲಿಂದು, ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ನಡೆಯುತ್ತಿದೆ. ಆಂಧ್ರಪ್ರದೇಶ, ಬಿಹಾರ, ಛತ್ತೀಸ್‌ಗಢ, ಜಾರ್ಖಂಡ್, ತೆಲಂಗಾಣ, ಒಡಿಶಾ, ಮಹಾರಾಷ್ಟ್ರ ಮತ್ತು ಮಧ್ಯಪ್ರದೇಶದ ಮುಖ್ಯಮಂತ್ರಿಗಳು ಸಭೆಯಲ್ಲಿ ಭಾಗವಹಿಸಿದ್ದಾರೆ. ಈ ರಾಜ್ಯಗಳ ಅಭಿವೃದ್ಧಿಗೆ ಎಲ್ಲ ರೀತಿಯ ಬೆಂಬಲ ನೀಡುವಲ್ಲಿ ನಿರತರಾಗಿರುವ ಕೇಂದ್ರದ ಐವರು ಸಚಿವರು ಸಭೆಯಲ್ಲಿ ಪಾಲ್ಗೊಂಡಿದ್ದಾರೆ. ಉಪ ರಾಷ್ಟ್ರೀಯ ಭದ್ರತಾ ಸಲಹೆಗಾರ, ಕೇಂದ್ರ ಮತ್ತು ರಾಜ್ಯಗಳ ಹಿರಿಯ ಅಧಿಕಾರಿಗಳು, ಕೇಂದ್ರೀಯ ಸಶಸ್ತ್ರ ಪಡೆಗಳ ಮುಖ್ಯಸ್ಥರು ಉಪಸ್ಥಿತರಿದ್ದಾರೆ. ೨೦೨೬ರ ಮಾರ್ಚ್ ವೇಳೆಗೆ ಎಡಪಂಥೀಯ ಉಗ್ರವಾದದ ಪಿಡುಗನ್ನು ಬೇರುಸಮೇತ ಕಿತ್ತೋಗೆಯಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಗೃಹ ಸಚಿವಾಲಯ ಬಿಡುಗಡೆ ಮಾಡಿರುವ ಹೇಳಿಕೆಯಲ್ಲಿ ತಿಳಿಸಲಾಗಿದೆ. ನಕ್ಸಲ್‌ವಾದದ ವಿರುದ್ಧ ಹೋರಾಟ ನಡೆಸಲು ಈ ರಾಜ್ಯಗಳಿಗೆ ಎಲ್ಲ ರೀತಿಯ ನೆರವನ್ನು ಕೇಂದ್ರ ಸರ್ಕಾರ ನೀಡುತ್ತಿದೆ ಎಂದು ತಿಳಿಸಲಾಗಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಕ್ರಮಗಳಿಂದಾಗಿ ಈ ರಾಜ್ಯಗಳಲ್ಲಿ ಎಡಪಂಥೀಯ ಉಗ್ರವಾದದ ಹಿಂಸಾಚಾರ ೨೦೧೦ಕ್ಕೆ ಹೋಲಿಕೆ ಮಾಡಿದರೆ ೨೦೨೪ರಲ್ಲಿ ಶೇಕಡ ೭೨ರಷ್ಟು ಕಡಿಮೆಯಾಗಿದೆ. ಸಾವಿನ ಸಂಖ್ಯೆಯೂ ಶೇಕಡ ೮೬ರಷ್ಟು ಇಳಿಮುಖವಾಗಿದೆ ಎಂದು ಸಚಿವಾಲಯದ ಹೇಳಿಕೆಯಲ್ಲಿ ಮಾಹಿತಿ ನೀಡಲಾಗಿದೆ.

<><*<><>*><>

ಹರಿಯಾಣ ಹಾಗೂ ಜಮ್ಮು ಮತ್ತು ಕಾಶ್ಮೀರ ವಿಧಾನಸಭಾ ಚುನಾವಣೆಗಳ ಮತ ಎಣಿಕೆ ನಾಳೆ ನಡೆಯಲಿದೆ. ಚುನಾವಣಾ ಆಯೋಗದಿಂದ ಮತ ಎಣಿಕೆಗೆ ವ್ಯಾಪಕ ಬಿಗಿ ಬಂದೋಬಸ್ತ್ ಮಾಡಲಾಗಿದೆ. ಕೇಂದ್ರಾಡಳಿತ ಪ್ರದೇಶವಾದ ಜಮ್ಮು ಮತ್ತು ಕಾಶ್ಮೀರದಲ್ಲಿ ನಾಳೆ ನಡೆಯಲಿರುವ ಮತ ಎಣಿಕೆಗೆ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಬಿಗಿ ಭದ್ರತಾ ವ್ಯವಸ್ಥೆ ಮಾಡಲಾಗಿದೆ ಎಂದು

ಆಕಾಶವಾಣಿ ಪ್ರತಿನಿಧಿ ವರದಿ ಮಾಡಿದ್ದಾರೆ. ಕೇಂದ್ರಾಡಳಿತ ಪ್ರದೇಶದಲ್ಲಿ ಸಂವಿಧಾನದ ೩೭೦ ಮತ್ತು ೩೫ಎ ವಿಧಿಗಳನ್ನು ೨೦೧೯ರಲ್ಲಿ ರದ್ದುಪಡಿಸಿದ ನಂತರ ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಯ ೯೦ ಕ್ಷೇತ್ರಗಳಿಗೆ ಚುನಾವಣೆ ನಡೆದಿದೆ. ಚುನಾವಣೆಯ ಮತ ಎಣಿಕೆಯ ಫಲಿತಾಂಶದ ನಂತರ ಮೊದಲ ನೂತನ ಸರ್ಕಾರ ರಚನೆಗೆ ಹಾದಿ ಸುಗಮವಾಗಲಿದೆ. ೧೦ ವರ್ಷಗಳ ಬಳಿಕ ಮೂರು ಹಂತಗಳಲ್ಲಿ ಚುನಾವಣೆ ನಡೆದಿತ್ತು. ಮತದಾರರು ಪ್ರಜಾತಂತ್ರ ಉತ್ಸವದಲ್ಲಿ ಉತ್ಸಾಹದಿಂದ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದರ ಪರಿಣಾಮವಾಗಿ ಅತ್ಯಧಿಕ ಮತದಾನ ದಾಖಲಾಗಿದೆ. ವಿದ್ಯುನ್ಮಾನ ಮತಯಂತ್ರಗಳಲ್ಲಿ ೮೭೩ ಅಭ್ಯರ್ಥಿಗಳ ರಾಜಕೀಯ ಭವಿಷ್ಯ ಅಡಕವಾಗಿದೆ. ನಾಳೆ ನಡೆಯಲಿರುವ ಮತ ಎಣಿಕೆ ಸುಸೂತ್ರವಾಗಿ ನಡೆಯಲು ಎಲ್ಲ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಮುಖ್ಯ ಚುನಾವಣಾಧಿಕಾರಿ ಪಾಂಡುರಂಗ .ಕೆ ಪೊಲೆ ತಿಳಿಸಿದ್ದಾರೆ. ಈ ನಡುವೆ, ಹರಿಯಾಣ ವಿಧಾನಸಭೆಯ ಎಲ್ಲ ೯೦ ಕ್ಷೇತ್ರಗಳಿಗೆ ನಡೆದ ಚುನಾವಣೆಯ ಮತ ಎಣಿಕೆಗೆ ೯೦ ಕೇಂದ್ರಗಳನ್ನು ತೆರೆಯಲಾಗಿದೆ. ರಾಜ್ಯದ ಎಲ್ಲ ೨೨ ಜಿಲ್ಲೆಗಳ ಕೇಂದ್ರ ಸ್ಥಾನಗಳಲ್ಲಿ ಮತ ಎಣಿಕೆ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಮುಖ್ಯ ಚುನಾವಣಾಧಿಕಾರಿ ಪಂಕಜ್ ಅಗರ್ವಾಲ್ ತಿಳಿಸಿದ್ದಾರೆ. ಕಲ್ಕಾ ಮತ್ತು ಪಂಚಕುಲ ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆಯನ್ನು ಪಂಚಕುಲದಲ್ಲಿ ನಡೆಸಲಾಗುವುದು. ನಾರಾಯಣ್‌ಘರ್ ಅಂಬಾಲ ಕಂಟೋನ್ಮೆಂಟ್, ಅಂಬಾಲ ಸಿಟಿ ಮತ್ತು ಮುಲ್ಲಾನಾ ಕ್ಷೇತ್ರಗಳ ಎಣಿಕೆಗಾಗಿ ಅಂಬಾಲದಲ್ಲಿ ನಾಲ್ಕು ಕೇಂದ್ರಗಳನ್ನು ತೆರೆಯಲಾಗಿದೆ. ಯಮುನಾ ನಗರ ಜಿಲ್ಲೆಯ ೪ ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆ, ಯಮುನಾ ನಗರದಲ್ಲೇ ನಡೆಯಲಿದೆ. ಆಯಾ ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆಯನ್ನು ಆಯಾ ಜಿಲ್ಲಾ ಕೇಂದ್ರಗಳಲ್ಲೇ ನಡೆಸಲು ಮತ ಎಣಿಕೆ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಅಗರ್ವಾಲ್ ತಿಳಿಸಿದ್ದಾರೆ. ಮತ ಯಂತ್ರಗಳನ್ನು ಸಂಗ್ರಹಿಸಿಟ್ಟಿರುವ ಸ್ಟ್ರಾಂಗ್ ರೂಮ್‌ಗಳನ್ನು ಸಿಸಿಟಿವಿ ಕಣ್ಗಾವಲಿನಲ್ಲಿ ಇಡಲಾಗಿದೆ. ಮತ್ತು ಮತಯಂತ್ರಗಳ ಸುರಕ್ಷತೆಗಾಗಿ ಮೂರು ಹಂತದ ಬದ್ಧತೆಯನ್ನು ಒದಗಿಸಲಾಗಿದೆ. ಮತ ಎಣಿಕೆ ಕೇಂದ್ರಗಳ ಸುತ್ತಮುತ್ತ ಬಿಗಿಬಂದೋಬಸ್ತ್ ಏರ್ಪಡಿಸಲಾಗಿದೆ ಎಂದು ಅವರು ಹೇಳಿದ್ದಾರೆ.

<><*<><>*><>

ಬಾಹ್ಯಾಕಾಶ ನವೋದ್ಯಮಗಳನ್ನು ಸ್ಥಾಪಿಸಲು ಒಂದು ಸಾವಿರ ಕೋಟಿ ರೂಪಾಯಿಗಳ ಸಾಹಸ ನಿಧಿಯನ್ನು ಸ್ಥಾಪಿಸಲಾಗಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಮೂರನೇ ಅವಧಿಯ ಮೊದಲ ೧೦೦ ದಿನಗಳ ಸಾಧನೆಗಳ ಕುರಿತು ದೆಹಲಿಯಲ್ಲಿ ನಿನ್ನೆ ಸುದ್ದಿಗಾರರಿಗೆ ಅವರು ವಿವರಿಸಿದರು. ದೇಶದ ಬಾಹ್ಯಾಕಾಶ ವಲಯದಲ್ಲಿ ನವೋದ್ಯಮಗಳ ಸಂಖ್ಯೆ ಕಳೆದ ೧೦ ವರ್ಷಗಳಲ್ಲಿ ಒಂದು ಲಕ್ಷ ೫೦ ಸಾವಿರಕ್ಕೂ ಹೆಚ್ಚಾಗಿವೆ. ಈ ವಿಚಾರದಲ್ಲಿ ಜಗತ್ತಿನಲ್ಲಿ ಮೂರನೇ ಸ್ಥಾನಕ್ಕೆ ಭಾರತ ತಲುಪಿದೆ ಎಂದು ಸಚಿವರು ಮಾಹಿತಿ ನೀಡಿದರು. ಅತ್ಯಂತ ಕಡಿಮೆ ಅವಧಿಯಲ್ಲಿ ಬಾಹ್ಯಾಕಾಶ

ಕ್ಷೇತ್ರದಲ್ಲಿ ಅದ್ವಿತೀಯ ಸಾಧನೆ ಮಾಡಲಾಗಿದೆ ಎಂದು ವಿವರಿಸಿದರು. ಬಾಹ್ಯಾಕಾಶ ವಲಯದಲ್ಲಿ ವಿದೇಶಿ ನೇರ ಬಂಡವಾಳ ಹೂಡಿಕೆಗೆ ಶೇಕಡ ೧೦೦ರಷ್ಟು ಅವಕಾಶ ಕಲ್ಪಿಸಲಾಗಿದೆ. ನೂತನ ಉಪಕ್ರಮಗಳು ಮತ್ತು ಹೊಸ ಉದ್ಯಮಶೀಲದಾರರಿಗೆ ಉತ್ತೇಜನ ನೀಡಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

<><*<><>*><>

ಪ್ರಧಾನಿ ನರೇಂದ್ರ ಮೋದಿ ನಾಯಕತ್ವದಲ್ಲಿ ಈಶಾನ್ಯ ರಾಜ್ಯಗಳ ಅಭಿವೃದ್ಧಿ ತ್ವರಿತ ಗತಿಯಲ್ಲಿ ಸಾಗುತ್ತಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ಸುದ್ದಿಸಂಸ್ಥೆಯೊಂದಕ್ಕೆ ನೀಡಿರುವ ಸಂದರ್ಶನದಲ್ಲಿ ಅವರು, ಮಣಿಪುರದಲ್ಲಿ ಕೆಲವು ಅಹಿತಕರ ಘಟನೆಗಳನ್ನು ಹೊರತುಪಡಿಸಿದರೆ, ಒಟ್ಟಾರೆ ಈಶಾನ್ಯ ರಾಜ್ಯಗಳ ವಲಯದಲ್ಲಿ ಶಾಂತಿ ನೆಲೆಸಿದೆ ಎಂದು ತಿಳಿಸಿದರು. ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಈ ವಲಯದ ಅಭಿವೃದ್ಧಿಗೆ ಯಾವುದೇ ನಿರ್ಧಿಷ್ಟ ಕ್ರಮಗಳನ್ನು ಕೈಗೊಂಡಿರಲಿಲ್ಲ ಎಂದು ಅವರು ಆರೋಪಿಸಿದರು.

<><*<><>*><>

ಭಾರತೀಯ ರಿಸರ್ವ್ ಬ್ಯಾಂಕ್‌ನ ಹಣಕಾಸು ನೀತಿ ಸಮಿತಿ - ಎಂಪಿಸಿ ಯ ಮೂರು ದಿನಗಳ ಸಭೆ ಇಂದು ಆರಂಭವಾಗಲಿದೆ. ಕೆಲವು ಮಹತ್ವದ ಬಡ್ಡಿದರಗಳ ವಿಚಾರಗಳಲ್ಲಿ ಆರ್‌ಬಿಐ ಯಥಾಸ್ಥಿತಿ ಕಾಪಾಡಿಕೊಳ್ಳುವ ಸಾಧ್ಯತೆಗಳಿವೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಆಹಾರ ಹಣ ದುಬ್ಬರ, ಆರ್ಥಿಕ ಪ್ರಗತಿ ವಿಚಾರಗಳ ಕುರಿತು ವಿಚಾರಗಳ ಬಗ್ಗೆ ಆರ್‌ಬಿಐ ತೀರ್ಮಾನ ಕೈಗೊಳ್ಳುವ ಸಾಧ್ಯತೆಗಳಿವೆ. ಚಿಲ್ಲರೆ, ಹಣದುಬ್ಬರ ಪರಿಸ್ಥಿತಿಯನ್ನು ಪರಿಗಣಿಸಿ ಗ್ರಾಹಕ ದರ ಸೂಚ್ಯಂಕ - ಸಿಪಿಐ, ಖಾತರಿ ಪಡಿಸಿಕೊಳ್ಳಲು ಆರ್‌ಬಿಐ ಮುಂದಾಗಬೇಕೆಂದು ಸರ್ಕಾರ ಸೂಚನೆ ನೀಡಿದೆ. ಈ ತಿಂಗಳ ಆರಂಭದಲ್ಲಿ ಆರ್‌ಬಿಐನ ಹಣಕಾಸು ನೀತಿ ಸಂಹಿತೆಯನ್ನು ಪುನರ್ ರಚಿಸಲಾಗಿದೆ. ಸಮಿತಿಗೆ ಮೂವರು ನೂತನ ಸದಸ್ಯರನ್ನು ಸೇರ್ಪಡೆ ಮಾಡಿಕೊಳ್ಳಲಾಗಿದೆ. ಮೂರು ದಿನಗಳ ಸಭೆಯ ನಿರ್ಣಯಗಳನ್ನು ಎಂಪಿಸಿ ಅಧ್ಯಕ್ಷರು ಹಾಗೂ ಆರ್‌ಬಿಐನ ಗವರ್ನರ್ ಶಕ್ತಿಕಾಂತ್ ದಾಸ್ ಬುಧವಾರ ಬಹಿರಂಗ ಪಡಿಸಲಿದ್ದಾರೆ.

<><*<><>*><>

ನರೇಂದ್ರ ಮೋದಿ ಸಾರ್ವಜನಿಕ ಜೀವನಕ್ಕೆ ಪಾದಾರ್ಪಣೆ ಮಾಡಿ ಇಂದಿಗೆ ೨೩ ವರ್ಷ ಪೂರ್ಣಗೊಂಡಿದೆ. ೨೦೦೧ರ ಇದೇ ದಿನ ಅವರು, ಗುಜರಾತ್‌ನ ಮುಖ್ಯಮಂತ್ರಿಯಾಗಿ ಪ್ರಥಮ ಬಾರಿಗೆ ಅಧಿಕಾರ ವಹಿಸಿಕೊಂಡಿದ್ದರು. ಗುಜರಾತ್ ಮುಖ್ಯಮಂತ್ರಿಯಾಗಿ ನರೇಂದ್ರ ಮೋದಿ ಅವರು, ಜಾರಿಗೆ ತಂದ ಹಲವು ಕಾರ್ಯಕ್ರಮಗಳಿಂದ ಸ್ಫೂರ್ತಿ ಪಡೆದ ಕೇಂದ್ರದಲ್ಲಿನ ಎನ್‌ಡಿಎ ಸರ್ಕಾರ

ಹಲವು ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೊಳಿಸಿತ್ತು. ನೀರಿನ ಸಂರಕ್ಷಣೆ, ಸಸಿ ನೆಡುವ ಆಂಧೋಲನ, ಸಂವಿಧಾನಕ್ಕೆ ಗೌರವ ನೀಡುವುದು, ಕ್ರೀಡಾ ಸಂಸ್ಕೃತಿಗೆ ಉತ್ತೇಜನ ಸೇರಿದಂತೆ ಹಲವು ಕಾರ್ಯಕ್ರಮಗಳು ಜಾರಿಯಾದ ನಂತರ ಇವುಗಳನ್ನು ಗುಜರಾತ್ ಮಾದರಿ ಎಂದು ಬಣ್ಣಿಸಲಾಯಿತು. ಆಡಳಿತದಲ್ಲಿ ಸಾರ್ವಜನಿಕರ ಪಾಲ್ಗೊಳ್ಳುವಿಕೆ ಅಥವಾ ಜನ ಭಾಗೀದಾರಿ ಎಂಬ ವಿಚಾರಕ್ಕೆ ನರೇಂದ್ರ ಮೋದಿ ಒತ್ತು ನೀಡಿದ್ದರು.

<><*<><>*><>

ಯುಎಇಯ ಶಾರ್ಜಾದಲ್ಲಿಂದು ನಡೆಯಲಿರುವ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್ ಬಿ ಗುಂಪಿನ ಪಂದ್ಯದಲ್ಲಿ ಇಂಗ್ಲೆಂಡ್ ತಂಡ ದಕ್ಷಿಣ ಆಫ್ರಿಕಾವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೭:೩೦ಕ್ಕೆ ಆರಂಭವಾಗಲಿದೆ. ನಿನ್ನೆ ದುಬೈನಲ್ಲಿ ಪಾಕಿಸ್ತಾನ ವಿರುದ್ಧ ೬ ವಿಕೆಟ್‌ಗಳ ಜಯ ಸಾಧಿಸುವ ಮೂಲಕ ಭಾರತ ಸೆಮಿಫೈನಲ್ ಆಸೆಯನ್ನು ಜೀವಂತವಾಗಿರಿಸಿಕೊಂಡಿದೆ. ೧೦೬ ರನ್‌ಗಳ ಗುರಿ ಬೆನ್ನತ್ತಿದ ಭಾರತ ಏಳು ಎಸೆತಗಳು ಬಾಕಿ ಇರುವಂತೆಯೇ ಗುರಿ ತಲುಪಿ ಗೆಲುವು ಸಾಧಿಸಿತು. ೩ ವಿಕೆಟ್ ಪಡೆದ ಅರುಂಧತಿ ರೆಡ್ಡಿ ಪಂದ್ಯ ಶ್ರೇಷ್ಠ ಪ್ರಶಸ್ತಿ ಪಡೆದರು. ತನ್ನ ಮುಂದಿನ ಪಂದ್ಯಗಳಲ್ಲಿ ಭಾರತದ ವನಿತೆಯರ ತಂಡ ಇದೇ ೯ ರಂದು ಶ್ರೀಲಂಕಾ ಮತ್ತು ಇದೇ ೧೩ ರಂದು ಹಾಲಿ ಚಾಂಪಿಯನ್ ಆಸ್ಟ್ರೇಲಿಯಾ ವಿರುದ್ಧ ಸೆಣಸಲಿದೆ.

<><*<><>*><>

ಗ್ವಾಲಿಯರ್‌ನಲ್ಲಿ ನಿನ್ನೆ ನಡೆದ ಮೂರು ಪಂದ್ಯಗಳ ಸರಣಿಯ ಟಿ-೨೦ ಪುರುಷರ ಕ್ರಿಕೆಟ್‌ನ ಮೊದಲ ಪಂದ್ಯದಲ್ಲಿ ಭಾರತ, ಬಾಂಗ್ಲಾ ತಂಡದ ವಿರುದ್ಧ ೭ ವಿಕೆಟ್‌ಗಳ ಜಯಗಳಿಸಿದೆ. ಮೊದಲ ಬ್ಯಾಟ್ ಮಾಡಿದ ಬಾಂಗ್ಲಾದೇಶ ತನ್ನೆಲ್ಲ ವಿಕೆಟ್ ಕಳೆದುಕೊಂಡು ೧೨೭ ರನ್ ಗಳಿಸಿತ್ತು. ೧೨೮ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಭಾರತ ೧೧.೫ ಓವರ್‌ಗಳಲ್ಲಿ ನಿಗದಿತ ಗುರಿ ಸಾಧಿಸುವ ಮೂಲಕ ೭ ವಿಕೆಟ್‌ಗಳ ಜಯವನ್ನು ದಾಖಲಿಸಿತು. ಸಂಜು ಸ್ಯಾಮಸನ್ ಮತ್ತು ಸೂರ್ಯಕುಮಾರ್ ಯಾದವ್ ತಲಾ ೨೯ ರನ್‌ಗಳನ್ನು ಪೇರಿಸಿದರೆ, ಹಾರ್ದಿಕ್ ಪಾಂಡ್ಯ ೧೬ ಎಸೆತಗಳಲ್ಲಿ ೩೯ ರನ್‌ಗಳನ್ನು ಗಳಿಸುವ ಮೂಲಕ ಭಾರತದ ಗೆಲುವಿನ ರುವಾರಿಯಾದರು.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>